ಬೆಳ್ತಂಗಡಿ ತಾಲ್ಲೂಕಿನ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡ ಒದಗಿಸುವುದು

4669 - ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಬೆಳ್ತಂಗಡಿ ಪದ್ಮ ದಜ ಆಳದಂಗಡಿ, ವೇಣೂರು ಮತ್ತು ಪೂಜಾಲಕಟ್ಟೆ ಪದವಿ ಪೂರ್ಣ ಕಾಲೇಜುಗಳಿಗೆ ಸ್ವಂತ ಕಟ್ಟಡ ಇಲ್ಲದಿರುವುದನ್ನು ಸರ್ಕಾರ ಗಮನಿಸಿದೆಯೇ?*

ಆ) *ಸದರಿ ಕಾಲೇಜುಗಳಿಗೆ ಸ್ವಂತ ಕಟ್ಟಡವನ್ನು ನಿರ್ಮಿಸಿಕೊಡುವ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?*

ಇ) *ಬೆಳ್ತಂಗಡಿ ತಾಲ್ಲೂಕಿನಲ್ಲಿ ಶಿಕ್ಷಣಾಧಿಕಾರಿಯ ಹುದ್ದೆಯು ಖಾಲಿ ಇದ್ದು ಅದನ್ನು ಯಾವಾಗ ತುಂಬಲಾಗುವುದು?*

ಈ) *ಬೆಳ್ತಂಗಡಿ ತಾಲ್ಲೂಕಿನಲ್ಲಿ ಪ್ರೌಢಶಾಲೆಗಳನ್ನು ನೂತನವಾಗಿ ಪ್ರಾರಂಭಿಸುವ ಬಗ್ಗೆ ಎಷ್ಟು ಪ್ರಸ್ತಾವನೆಗಳು ಸರ್ಕಾರಕ್ಕೆ ಬಂದಿವೆ? ಈ ಕುರಿತು ಸರ್ಕಾರದವರು ಕೈಗೊಂಡ ಕ್ರಮಗಳೇನು?*

ಶ್ರೀ ಹೆಚ್. ವಿಶ್ವನಾಥ್ (ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು) :

ಅ) ಸದರಿ ಕಾಲೇಜುಗಳು ಸಂಯುಕ್ತ ಪದವಿ ಪೂರ್ವ ಕಾಲೇಜುಗಳಾಗಿವೆ. ಆದ ಕಾರಣ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳು ಒಂದೇ ಕಟ್ಟಡದಲ್ಲಿ ನಡೆಯುವ ವಾಡಿಕೆ. ಪದವಿ ಪೂರ್ವ ಕಾಲೇಜುಗಳಿಗಾಗಿಯೆ ಪ್ರತ್ಯೇಕ ಕಟ್ಟಡದ ಪ್ರಶ್ನೆ ಉದ್ಭವಿಸುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಈಗಾಗಲೇ ತುಂಬಿದೆ.

ಈ) ಮೂರು ಪ್ರಸ್ತಾವನೆಗಳು ಬಂದಿದೆ. ಪ್ರಸಕ್ತ ಆಯವ್ಯಯದಲ್ಲಿ ಇದಕ್ಕಾಗಿ ಅನುದಾನ ಲಭ್ಯವಿರುವುದಿಲ್ಲ.

ರಾಜ್ಯದಲ್ಲಿನ ಗ್ರಾಮಪಂಚಾಯತಿಗಳಿಗೆ 2000-2001ನೇ ಸಾಲಿಗೆ ನೀಡಲಾಗುವ ಅನುದಾನ

4670 - ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿನ ಗ್ರಾಮ ಪಂಚಾಯತಿಗಳಿಗೆ 2000-2001ನೇ ಸಾಲಿಗೆ ಎಷ್ಟು ಅನುದಾನವನ್ನು ಮಂಜೂರು ಮಾಡಲಾಗಿದೆ? ಅದರಲ್ಲಿ ಈಗಾಗಲೇ ಬಿಡುಗಡೆ ಮಾಡಲಾಗಿರುವ ಮೊತ್ತವೆಷ್ಟು?*